# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 321 |
| ಮಾನ್ಯ ಸದಸ್ಯರ ಹೆಸರು | ಶ್ರೀ ಅ.ದೇವೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 15.02.2024 |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಅಬಕಾರಿ ಇಲಾಖೆಯಲ್ಲಿ ಅಬಕಾರಿ ಇನ್ಸ್‌ಪೆಕ್ಟರ್‌ರವರುಗಳ ವರ್ಗಾವಣೆಯನ್ನು ಎಷ್ಟು ವರ್ಷಗಳಿಗೊಮ್ಮೆ ಮಾಡಲಾಗುತ್ತದೆ; | ಅಬಕಾರಿ ಇಲಾಖೆಯ ಅಬಕಾರಿ ನಿರೀಕ್ಷಕರ ವೃಂದವು ಗ್ರೂಪ್–ಸಿ ವೃಂದವಾಗಿದ್ದು, ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/22/ಎಸ್.ಟಿ.ಆರ್/2013, ದಿನಾಂಕ: 07.06.2013ರಲ್ಲಿ ಗ್ರೂಪ್–ಸಿ ವೃಂದಕ್ಕೆ ನಿಗದಿಪಡಿಸಿರುವಂತೆ ಒಂದು ಸ್ಥಳದಲ್ಲಿ ಕನಿಷ್ಠ 4 ವರ್ಷ ಕಾರ್ಯನಿರ್ವಹಿಸಿದ ಅಬಕಾರಿ ನಿರೀಕ್ಷಕರನ್ನು ವರ್ಗಾವಣೆಗೊಳಿಸಲು ಕ್ರಮವಹಿಸಲಾಗುತ್ತದೆ. |
| ಆ) | ಅಬಕಾರಿ ಇಲಾಖೆಯಲ್ಲಿ ಸಬ್ ಇನ್ಸ್‌ಪೆಕ್ಟರ್ ಹಾಗೂ ಗಾರ್ಡ್‌ಗಳ ಹುದ್ದೆ ನೇಮಕಾತಿ ಮಾಡುವುದು ಯಾವಾಗ; | ಅಬಕಾರಿ ಇಲಾಖೆಯ ಅಬಕಾರಿ ಉಪ ನಿರೀಕ್ಷಕರು ಮತ್ತು ಅಬಕಾರಿ ಪೇದೆ ಹುದ್ದೆಗಳ ನೇಮಕಾತಿ ಸಂಬಂಧ ಕೆಳಕಂಡಂತೆ ಕ್ರಮಕೈಗೊಳ್ಳಲಾಗುತ್ತಿದೆ.<br><br>• **<u>ಅಬಕಾರಿ ಉಪ ನಿರೀಕ್ಷಕರು</u>**: 2019ನೇ ಸಾಲಿನ 59 ಅಬಕಾರಿ ಉಪ ನಿರೀಕ್ಷಕರ ವೃಂದದ ನೇಮಕಾತಿಗೆ ಸಂಬಂಧಿಸಿದಂತೆ 42 ಅಭ್ಯರ್ಥಿಗಳು ಹಾಜರಾಗಿದ್ದು, 17 ಅಭ್ಯರ್ಥಿಗಳು ಕರ್ತವ್ಯಕ್ಕೆ ಹಾಜರಾಗಿರುವುದಿಲ್ಲ. ಸದರಿ 17 ಅಭ್ಯರ್ಥಿಗಳಲ್ಲಿ ಒಬ್ಬ ಅಭ್ಯರ್ಥಿಯ ನೇಮಕಾತಿಯನ್ನು ಮಾನ್ಯ ನ್ಯಾಯಾಲಯದ ಆದೇಶದಂತೆ ಮೀಸಲಿರಿಸಿ, ಉಳಿದ 16 ಅಭ್ಯರ್ಥಿಗಳ ನೇಮಕಾತಿಯನ್ನು ರದ್ದುಗೊಳಿಸಿಲಾಗಿದ್ದು, ನಂತರ ಫಾರಂ–7 ಅನ್ನು ಸಲ್ಲಿಸಿ ಹೆಚ್ಚುವರಿ ಆಯ್ಕೆಪಟ್ಟಿಗಾಗಿ ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಹೆಚ್ಚುವರಿ ಆಯ್ಕೆಪಟ್ಟಿ ಸ್ವೀಕೃತವಾದ ನಂತರದಲ್ಲಿ ನೇರ ನೇಮಕಾತಿ ಕೋಟಾದಡಿ ಖಾಲಿ |

| | | |
|---|---|---|
| | | ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುತ್ತದೆ.<br><br>• **ಅಬಕಾರಿ ಪೇದೆ**: 2019ನೇ ಸಾಲಿನ 1003 ಅಬಕಾರಿ ಪೇದೆ ವೃಂದದ ನೇಮಕಾತಿಗೆ ಸಂಬಂಧಿಸಿದಂತೆ 254 ಅಭ್ಯರ್ಥಿಗಳು ಹಾಜರಾಗದೇ ಇರುವುದರಿಂದ ಹೆಚ್ಚುವರಿ ಆಯ್ಕೆ ಪಟ್ಟಿಗಾಗಿ ಕರ್ನಾಟಕ ಲೋಕ ಸೇವಾ ಆಯೋಗವನ್ನು ಕೋರಲಾಗಿತ್ತು. ಅದರಂತೆ ಕರ್ನಾಟಕ ಲೋಕ ಸೇವಾ ಆಯೋಗವು ದಿನಾಂಕ:30.08.2023 ರಂದು ಹೆಚ್ಚುವರಿ ಆಯ್ಕೆ ಪಟ್ಟಿಯನ್ನು ಪ್ರಕಟಿಸಿದ್ದು, ಸದರಿ ಆಯ್ಕೆ ಪಟ್ಟಿಯಂತೆ ನೇಮಕಾತಿ ಪ್ರಕ್ರಿಯೆಯನ್ನು ಜಿಲ್ಲಾ ಹಂತದಲ್ಲಿ ಜರುಗಿಸಲಾಗುತ್ತಿದೆ.<br><br>• ಅಬಕಾರಿ ಉಪ ನಿರೀಕ್ಷಕರ ವೃಂದದಲ್ಲಿ ಪ್ರಸ್ತುತ ದಿನಾಂಕಕ್ಕೆ ನೇರ ನೇಮಕಾತಿ ಕೋಟಾದಡಿ 310 ಹುದ್ದೆಗಳು ಖಾಲಿ ಇರುತ್ತವೆ ಹಾಗೂ ಅಬಕಾರಿ ಪೇದೆ ವೃಂದದಲ್ಲಿ ಪ್ರಸ್ತುತ ದಿನಾಂಕಕ್ಕೆ ನೇರ ನೇಮಕಾತಿ ಕೋಟಾದಡಿ 1438 ಹುದ್ದೆಗಳು ಖಾಲಿ ಇದ್ದು, ನೇಮಕಾತಿ ಮಾಡಲು ಕ್ರಮವಹಿಸಲಾಗುತ್ತದೆ. |
| ಇ) | ಅಬಕಾರಿ ಇಲಾಖೆ ಮತ್ತು ಪೊಲೀಸ್ ಇಲಾಖೆಯನ್ನು ವಿಲೀನಗೊಳಿಸುವ ಪ್ರಸ್ತಾವನೆಯ ಕುರಿತು ಸರ್ಕಾರದ ನಿಲುವೇನು? | ಇಂತಹ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |

**ಆಇ 13 ಇಎಲ್‌ಕ್ಯೂ 2024**

(ಆರ್.ಬಿ.ತಿಮ್ಮಾಪುರ)

ಅಬಕಾರಿ ಸಚಿವರು